# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1893
2. ಮಾನ್ಯ ಸದಸ್ಯರ ಹೆಸರು : ಶ್ರೀ ಆರ್.ಬಿ.ತಿಮ್ಮಾಪೂರ(ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 15.03.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳೆಷ್ಟು; ಆ ಪೈಕಿ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಗಳಾವುವು;</td><td>ಪ್ರಸ್ತುತ ರಾಜ್ಯದಲ್ಲಿ ಒಟ್ಟು 89 ನೋಂದಾಯಿತ ಸಕ್ಕರೆ ಕಾರ್ಖಾನೆಗಳು ಇರುತ್ತವೆ. ಇವುಗಳ ಪೈಕಿ ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಮತ್ತು ಎಂ.ಪಿ.ಎಂ. ಶುಗರ್ಸ್ ಲಿ., ಭದ್ರಾವತಿ ಈ ಎರಡು ಕಾರ್ಖಾನೆಗಳು ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುತ್ತವೆ.</td></tr>
<tr><td>(ಆ)</td><td>ಸಂಪೂರ್ಣವಾಗಿ ಮುಚ್ಚಿರುವ ಕಾರ್ಖಾನೆಗಳೆಷ್ಟು; ಅದಕ್ಕೆ ಕಾರಣಗಳೇನು;</td><td>ಪ್ರಸ್ತುತ ರಾಜ್ಯದಲ್ಲಿ ಒಟ್ಟು 17 ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿದ್ದು, ವಿವರಗಳು ಈ ಕೆಳಕಂಡಂತಿವೆ.<br><table><tr><th>ಕ್ರ.ಸಂ.</th><th>ವಲಯ</th><th>ಸಂಖ್ಯೆ</th></tr><tr><td>1.</td><td>ಸಾರ್ವಜನಿಕ ವಲಯ</td><td>02</td></tr><tr><td>2.</td><td>ಜಂಟಿವಲಯ</td><td>01</td></tr><tr><td>3.</td><td>ಸಹಕಾರಿ(ಸ್ಥಗಿತ)</td><td>04</td></tr><tr><td>4.</td><td>ಸಹಕಾರಿ (ಸಮಾಪನೆ)</td><td>04</td></tr><tr><td>5.</td><td>ಖಾಸಗಿ</td><td>06</td></tr><tr><td colspan="2">ಒಟ್ಟು</td><td>17</td></tr></table><br>ಮೇಲ್ಕಂಡ ಕಾರ್ಖಾನೆಗಳು ಸ್ಥಗಿತಗೊಳ್ಳಲು/ಮುಚ್ಚಲು ಪ್ರಮುಖವಾಗಿ ಈ ಕೆಳಕಂಡ ಕಾರಣಗಳನ್ನು ಗುರುತಿಸಬಹುದಾಗಿದೆ.<br>1. ಕಾರ್ಖಾನೆಗಳಲ್ಲಿ ದುಡಿಯುವ ಬಂಡವಾಳದ ಕೊರತೆ ಉಂಟಾಗಿರುವುದು ಮತ್ತು ಹಣಕಾಸು ಸಂಸ್ಥೆಗಳಿಂದ ಆರ್ಥಿಕ ನೆರವು ಪಡೆಯುವಲ್ಲಿ ವಿಫಲವಾಗಿರುವುದು.<br>2. ಕಾರ್ಖಾನೆಯ ಸಾಮರ್ಥ್ಯಕ್ಕೆ ಅನುಗುಣವಾಗಿ ಕಬ್ಬು ಮೀಸಲು ಕ್ಷೇತ್ರದಲ್ಲಿ ಕಬ್ಬಿನ ಲಭ್ಯತೆ ಇಲ್ಲದಿರುವುದು.<br>3. ಕಾರ್ಖಾನೆಗಳು ಹೊಂದಿರುವ ಆಸ್ತಿಗಿಂತ ಸಾಲ ಮತ್ತು ಹೊಣೆಗಾರಿಕೆಗಳು ಹೆಚ್ಚಾಗಿರುವುದು ಮತ್ತು ಕ್ರೋಢೀಕೃತ ನಷ್ಟ ಉಂಟಾಗಿರುವುದು.<br>4. ಕಾರ್ಖಾನೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಸಿಬ್ಬಂದಿ ನೇಮಕ ಮಾಡಿಕೊಂಡಿರುವುದರಿಂದ ಸಿಬ್ಬಂದಿಗಳ ವೇತನ ಮತ್ತು ಭತ್ಯೆಗಳ ಹೊರೆ ಹೆಚ್ಚಾಗಿರುವುದು.<br>5. ಆಧುನಿಕ ತಂತ್ರಜ್ಞಾನವನ್ನು ಒಳಗೊಂಡ ಯಂತ್ರೋಪಕರಣಗಳನ್ನು ಅಳವಡಿಸಿಕೊಳ್ಳದೇ ಇರುವುದು.<br>6. ಆಡಳಿತ ಮಂಡಳಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಣೆ ಮಾಡದಿರುವುದು ಹಾಗೂ ಇನ್ನಿತರೆ ಕಾರಣಗಳು.</td></tr>
</table>

| | | |
|---|---|---|
| (ಇ) | ಮುಚ್ಚಲ್ಪಟ್ಟಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಃ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ? | ದುಡಿಯುವ ಬಂಡವಾಳದ ಕೊರತೆ ಮತ್ತು ಆರ್ಥಿಕ ನಷ್ಟದಿಂದ ಹಾಗೂ ಇನ್ನಿತರೆ ಆಡಳಿತಾತ್ಮಕ ಕಾರಣಗಳಿಂದಾಗಿ ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಯ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಃಶ್ಚೇತನಗೊಳಿಸುವುದು ಸರ್ಕಾರದ ಪ್ರಸ್ತುತ ನೀತಿಯಾಗಿರುತ್ತದೆ.<br>ಅದರಂತೆ ಇದುವರೆಗೆ 9 ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು LROT (Lease Rehabilitate Operate Transfer) ಮತ್ತು BOOT (Build Own Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆ. ಆ ಮೂಲಕ ರೈತರ ಮತ್ತು ಕಾರ್ಮಿಕರ ಹಿತ ಕಾಪಾಡುವುದರೊಂದಿಗೆ ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲಾಗಿದೆ.<br>ಖಾಸಗಿ ವಲಯದ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತನಗೊಳಿಸುವ ವಿಷಯವು ಆಯಾ ಸಂಬಂಧಪಟ್ಟ ಆಡಳಿತ ಮಂಡಳಿಗಳೇ ನಿರ್ಣಯಿಸಬೇಕಾಗಿರುತ್ತದೆ. ಖಾಸಗಿ ಸಕ್ಕರೆ ಕಾರ್ಖಾನೆಗಳ ಪುನಶ್ಚೇತನದ ವಿಷಯದಲ್ಲಿ ರಾಜ್ಯ ಸರ್ಕಾರವು ಹಸ್ತಕ್ಷೇಪ ಮಾಡಲು ಅವಕಾಶವಿರುವುದಿಲ್ಲ. |

ಸಂಖ್ಯೆ: ಸಿಐ 40 ಎಸ್‌ಜಿಎಫ್ 2022

(ಶಂಕರ.ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು